CW.2 PW.2

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ., ಕನಕಪುರ ರವರ ನ್ಯಾಯಾಲಯದಲ್ಲಿ**

# CC No.793/2018

| | |
|---|---|
| ಸಾಕ್ಷಿದಾರರ ಹೆಸರು | ಕೃಷ್ಣನಾಯ್ಕ |
| ತಂದೆಯ ಹೆಸರು | ರಾಮ್ ಜೀನಾಯ್ಕ |
| ವಯಸ್ಸು | 36 ವರ್ಷ |
| ವೃತ್ತಿ | ಕೂಲಿ |
| ವಿಳಾಸ | ಹನುಮನಹಳ್ಳಿ |
| ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕಃ | 12.11.2025 |

**ಮುಖ್ಯ ವಿಚಾರಣೆ ಎ ಪಿ ಪಿ ರವರಿಂದಃ-**

ಆರೋಪಿಯ ಪರಿಚಯ ಇಲ್ಲ. ಚಾಸಾ-1, ಚಾಸಾ-3 ರಿಂದ ಚಾಸಾ-7 ರವರ ಪರಿಚಯ ಇರುತ್ತದೆ.

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ.

ಸಾಕ್ಷಿಗೆ ಈಗ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಕೇವಲ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆ ಸ್ಥಳ ಮಹಜರ್ ಆಗಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ನಾನು ಯಾವ ಕಾರಣಕ್ಕೆ ಎಲ್ಲಿ ಸದರಿ ಸಹಿ ಮಾಡಿರುತ್ತೇನೆಂದು ಗೊತ್ತಿಲ್ಲ. ಅದರಲ್ಲಿರುವ ಅಂಶಗಳ ಬಗ್ಗೆ ಗೊತ್ತಿರುವುದಿಲ್ಲ.

CW.2 PW.2

**(ಈ ಹಂತದಲ್ಲಿ ಸಾಕ್ಷಿದಾರ ಪ್ರತಿಕೂಲ ಸಾಕ್ಷಿ ನುಡಿದ ಕಾರಣ ಸ.ಸ ಅ ರವರು ಸಾಕ್ಷಿಯನ್ನು ವಾಟೀ ಸವಾಲನ್ನು ಮಾಡಲು ಅನುಮತಿ ನೀಡಲು ಕೋರಿದ ಮೇರೆಗೆ ಅನುಮತಿ ನೀಡಲಾಯಿತು).**

**ವಾಟೀ ಸವಾಲುಃ ಸ. ಸ. ಅ. ರವರಿಂದ**

ದಿನಾಂಕ 08.02.2017 ರಂದು ಕನಕಪುರ ಟೌನ್ ಎನ್ ಹೆಚ್ 209 ಕನಕಪುರ ಸಾತನೂರು ರಸ್ತೆಯಲ್ಲಿ ನಾರಾಯಣಪ್ಪ ಕೆರೆಯ ಬಳಿ ಇರುವ ಗಡಸಹಳ್ಳಿ ಹನುಮನಹಳ್ಳಿ ವೆಂಕಟರಾಮನದೊಡ್ಡಿ ರಸ್ತೆ ಕ್ರಾಸ್ ಬಳಿ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ನನ್ನ ಹಾಗೂ ಚಾಸಾ-3 ರವರ ಸಮಕ್ಷಮ ಮಧ್ಯಾಹ್ನ 2.15 ಗಂಟೆಯಿಂದ 3.15 ಗಂಟೆಯವರೆಗೂ ಮಹಜರ್ ಮಾಡಿ ಸ್ಥಳದಲ್ಲಿ ಈಗ ಓದಿ ಹೇಳಿದಂತೆ ವಾಹನಗಳನ್ನು ಅಮಾನತು ಪಡಿಸಿಕೊಂಡು ನಮ್ಮಗಳ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ನನಗೆ ಎಲ್ಲಾ ವಿಷಯ ಗೊತ್ತಿದ್ದರು ಗೊತ್ತಿಲ್ಲ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಈಗ ಅಪಘಾತ ಪಡಿಸಿದ ಹಾಗೂ ಅಪಘಾತಕ್ಕೆ ಒಳಗಾದ ವಾಹನಗಳ ಪೊಟೋಗಳನ್ನು ತೋರಿಸಲಾಗಿ ಸಾಕ್ಷಿಯು ಅವುಗಳನ್ನು ಗುರುತಿಸಿರುವುದಿಲ್ಲ.

**ವಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಏನೂ ಇರುವುದಿಲ್ಲ**

**ಮರುವಿಚಾರಣೆಃ ಇರುವುದಿಲ್ಲ**

**ಓ ಹೇ ಕೇ ಸರಿ ಇದೆ**

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ.,**

**ಕನಕಪುರ .**